ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕಾವೇರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ ದಿನಾಂಕ : DATE : 12/6/2020

# ವಾಡಿಕೆ ಪ್ರಮಾಣದ ಕಾವೇರಿ ನೀರು ಹರಿಸಲು ನಿರ್ದೇಶನ

■ ವಿಜಯವಾಣಿ ಸುದ್ದಿಜಾಲ ನವದೆಹಲಿ 12-06-2020

» ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸಭೆ

ಕಾವೇರಿ ನ್ಯಾಯಾಧಿಕರಣ ಹಾಗೂ ಸುಪ್ರೀಂಕೋರ್ಟ್ ಅನ್ವಯ ಜೂನ್ ತಿಂಗಳಲ್ಲಿ ವಾಡಿಕೆಯಂತೆ 9.19 ಟಿಎಂಸಿ ಮತ್ತು ಜುಲೈನಲ್ಲಿ 31.24 ಟಿಎಂಸಿ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುವಂತೆ ಕರ್ನಾಟಕ ಸರ್ಕಾರಕ್ಕೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನಿರ್ದೇಶನ ನೀಡಿದೆ. ಆದರೆ, ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ತಮಿಳುನಾಡು ಮತ್ತು ಪುದುಚೇರಿ ವಿರೋಧಗಳಿರುವುದರಿಂದ ಸದ್ಯಕ್ಕೆ ಈ ಬಗ್ಗೆ ಯಾವುದೇ ಚರ್ಚೆ ನಡೆಸಿಲ್ಲ. ತಮಿಳುನಾಡಿನಿಂದ ನೀರಿನ ಬೇಡಿಕೆ ಹೆಚ್ಚಿದ್ದರೂ ನಿಗದಿತ ಪ್ರಮಾಣದಷ್ಟು ಮಾತ್ರ ನೀರು ಹರಿಸುವಂತೆ ಪ್ರಾಧಿಕಾರ ಸೂಚಿರುವುದು ರಾಜ್ಯದ ಮಟ್ಟಿಗೆ ಸಮಾಧಾನಕರ ವಿಷಯವಾಗಿದೆ.

ಮೇಕೆದಾಟು ಯೋಜನೆ ಬಗ್ಗೆ ಪ್ರಾಧಿಕಾರ ಚರ್ಚೆ ನಡೆಸಬೇಕು ಎಂದು ತಮಿಳುನಾಡು ಮುಖ್ಯ ಕಾರ್ಯದರ್ಶಿ ಷಣ್ಮುಗಮ್ ಕೇಂದ್ರ ಜಲಶಕ್ತಿ ಸಚಿವಾಲಯಕ್ಕೆ ಪತ್ರ ಬರೆದಿದ್ದರು. ಪ್ರಕರಣ ಕೋರ್ಟ್‌ನಲ್ಲಿ ಇರುವುದರಿಂದ ಸದ್ಯಕ್ಕೆ ಈ ಬಗ್ಗೆ ಚರ್ಚೆ ನಡೆಸುವುದಿಲ್ಲ ಎಂದು ತಮಿಳುನಾಡಿಗೆ ಪ್ರಾಧಿಕಾರದ ಅಧ್ಯಕ್ಷರು ತಿಳಿಸಿದ್ದಾರೆನ್ನಲಾಗಿದೆ. ಹೀಗಾಗಿಯೇ, ಕಾವೇರಿ ಕಣಿವೆ ರಾಜ್ಯಗಳ ಪ್ರತಿನಿಧಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಸಲಾಗಿದ್ದ ಸಭೆಯಲ್ಲಿ ಈ ವಿಷಯದ ಬಗ್ಗೆ ಚರ್ಚೆ ನಡೆಯಲಿಲ್ಲ ಎಂದು ತಿಳಿದುಬಂದಿದೆ.